ಡಾ. ಶಾಲಿನಿ ರಜನೀಶ್, ಭಾ.ಆ.ಸೇ.,
ಮುಖ್ಯ ಕಾರ್ಯದರ್ಶಿ
Dr. SHALINI RAJNEESH, I.A.S.,
Chief Secretary

ಕರ್ನಾಟಕ ಸರ್ಕಾರ
**Government of Karnataka**

**ಸಂ: ಮುಕಾ:11787194:2026**

**ಕರ್ನಾಟಕ ಸರ್ಕಾರ ಸಚಿವಾಲಯ**
**ವಿಧಾನಸೌಧ,**
**ಬೆಂಗಳೂರು, ದಿನಾಂಕ: 29-01-2026.**

## ಸುತ್ತೋಲೆ

"ಖಾದಿ" ಕೇವಲ ಒಂದು ಉಡುಪು ಮಾತ್ರವಲ್ಲ, ಅದು ರಾಷ್ಟ್ರದ ಗೌರವ ಮತ್ತು ಹೆಮ್ಮೆಯ ಪ್ರತೀಕವಾಗಿದೆ. ಪ್ರಸ್ತುತ ಖಾದಿ ನೇಕಾರರು ನೂತನ ಶೈಲಿಯ ವಿನ್ಯಾಸದಲ್ಲಿ ಉಡುಪುಗಳನ್ನು ತಯಾರಿಸಲು ಮುಂದಾಗಿದ್ದಾರೆ. ಅಲ್ಲದೇ, ಖಾದಿ ಉತ್ಪಾದನೆಯು ಗ್ರಾಮೀಣ ಆರ್ಥಿಕತೆಯ ಮೂಲ ಆಧಾರವಾಗಿದ್ದು, ರಾಜ್ಯದ ಸಾವಿರಾರು ಗ್ರಾಮೀಣ ನೂಲುಗಾರರು ಮತ್ತು ನೇಕಾರರಿಗೆ ನೇರ ಹಾಗೂ ಪರೋಕ್ಷವಾಗಿ ಜೀವನೋಪಾಯವನ್ನು ಒದಗಿಸುತ್ತಿದೆ.

ಆದುದರಿಂದ, 77ನೇ ಗಣರಾಜ್ಯೋತ್ಸವದ ಶುಭಸಂದರ್ಭದಲ್ಲಿ, ಸಾರ್ವಜನಿಕ ಸೇವೆಯನ್ನು ದೇಶದ ಸ್ವಾತಂತ್ರ್ಯ ಹೋರಾಟದೊಂದಿಗೆ ಮರುಸಂಪರ್ಕಗೊಳಿಸುವ ಉದ್ದೇಶದಿಂದ ರಾಜ್ಯ ಸರ್ಕಾರವು ಖಾದಿ ಬಳಕೆಯನ್ನು ಉತ್ತೇಜಿಸಲು ಒಂದು ಮಹತ್ವದ ನಿರ್ಧಾರವನ್ನು ಕೈಗೊಂಡಿದೆ. ಅದರಂತೆ, ರಾಜ್ಯದ ಎಲ್ಲಾ ಸರ್ಕಾರಿ/ ಅನುದಾನಿತ ಸಂಸ್ಥೆಗಳು/ ನಿಗಮ/ಮಂಡಳಿ/ಸ್ವಾಯತ್ತ ಸಂಸ್ಥೆಗಳು/ ವಿಶ್ವವಿದ್ಯಾಲಯಗಳ ಅಧಿಕಾರಿ/ ನೌಕರರುಗಳು "ಸ್ವಯಂ ಪ್ರೇರಣೆಯಿಂದ" **ಪ್ರತಿ ತಿಂಗಳ ಮೊದಲ ಶನಿವಾರದಂದು** ಖಾದಿ ಉಡುಪನ್ನು ಧರಿಸುವುದು ಅಲ್ಲದೇ, ಸ್ವಾತಂತ್ರ್ಯ ದಿನಾಚರಣೆ ಮತ್ತು ಗಣರಾಜ್ಯೋತ್ಸವ ಸೇರಿದಂತೆ ಎಲ್ಲಾ ಅಧಿಕೃತ ಸರ್ಕಾರಿ ಕಾರ್ಯಕ್ರಮಗಳಲ್ಲಿ ಭಾಗವಹಿಸುವಾಗ ಖಾದಿ ಉಡುಪನ್ನು ಧರಿಸುವಂತೆ ತಮ್ಮ ಇಲಾಖೆಗಳ ಅಧಿಕಾರಿ/ ಸಿಬ್ಬಂದಿಗಳಿಗೆ ನಿರ್ದೇಶನ ನೀಡಲು ಕೋರಿದೆ.

ಈ ಕ್ರಮವು ಸರ್ಕಾರಿ ಅಧಿಕಾರಿ/ ನೌಕರರುಗಳಲ್ಲಿ ಸ್ವದೇಶಿ ಉತ್ಪನ್ನಗಳ ಬಗ್ಗೆ ಗೌರವ, ಐಕ್ಯತೆ, ರಾಷ್ಟ್ರೀಯ ಭಾವನೆ, ಭಾರತೀಯತೆ, ಸ್ವಾಭಿಮಾನ ಮತ್ತು ಸಾಮಾಜಿಕ ಜವಾಬ್ದಾರಿಯ ಭಾವನೆಯನ್ನು ಬೆಳೆಸುವಲ್ಲಿ ಸಹಾಯಕವಾಗಲಿದೆ ಎಂದು ಭಾವಿಸಿದೆ.

ಎಲ್ಲಾ ಜಿಲ್ಲೆಗಳಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ **176 ಖಾದಿ ಸಂಘ-ಸಂಸ್ಥೆಗಳ ಹೆಸರು, ವಿಳಾಸ ಹಾಗೂ ಉತ್ಪನ್ನಗಳ ವಿವರಗಳನ್ನು** https://khadi.karnataka.gov.in ದಲ್ಲಿ ಪಡೆಯಬಹುದಾಗಿದೆ.

**(ಡಾ. ಶಾಲಿನಿ ರಜನೀಶ್)**
ಮುಖ್ಯ ಕಾರ್ಯದರ್ಶಿ

**ಇವರಿಗೆ:**
ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳು.

ಕೊಠಡಿ ಸಂಖ್ಯೆ: 320, 3ನೇ ಮಹಡಿ, ವಿಧಾನಸೌಧ, ಬೆಂಗಳೂರು - 560 001, ದೂರವಾಣಿ ಕಛೇರಿ: +91-80-22252442 / 22033300 ಫ್ಯಾಕ್ಸ್: +91-80-22258913
Room No. 320, 3rd Floor, Vidhana Soudha, Bengaluru - 560 001, Phone. off. +91-80-22252442 / 22033300 Fax: +91-80-22258913
E-mail : cs@karnataka.gov.in